## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2017–18ನೇ ಸಾಲಿನ ಗ್ರಾಮೀಣಾಭಿವೃದ್ಧಿ ಭವನ ಮತ್ತು ಇತರೆ ಕಟ್ಟಡಗಳಡಿಯಲ್ಲಿ ಪಂಚಾಯತ್ ರಾಜ್ ಭವನ ಅಥವಾ ರಾಜ್ಯ ಪಂಚಾಯತ್ ಸಂಪನ್ಮೂಲ ಕೇಂದ್ರ ಕಟ್ಟಡ ನಿರ್ಮಾಣ ಮಾಡಲು ಅನುದಾನ ಬಿಡುಗಡೆಗೊಳಿಸುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ನಡೆದ ಉನ್ನತಾಧಿಕಾರಿಗಳ ಸಮಿತಿ ಸಭೆಯ ನಡವಳಿಗಳು ದಿನಾಂಕ:31-01-2011.
2. ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆ, ಮೈಸೂರು ಇವರ ಪತ್ರ ಸಂಖ್ಯೆ:ರಾಗ್ರಾಸಂ/ಬಿ.ಆರ್.ಜಿ.ಎಫ್:80(8)/2008-09, ದಿನಾಂಕ:14-03-2011.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್) ಇವರ ಅಧ್ಯಕ್ಷತೆಯಲ್ಲಿ ನಡೆದ ಸಭಾ ನಡವಳಿಗಳು ದಿನಾಂಕ:23-05-2017 ಹಾಗೂ 23-08-2017.
4. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 06 ತಾಪಸ 2011, ದಿನಾಂಕ:24-07-2017.

**ಪ್ರಸ್ತಾವನೆ:**

2017–18ನೇ ಸಾಲಿನ ರಾಜ್ಯ ಆಯವ್ಯಯದ ಲೆಕ್ಕ ಶೀರ್ಷಿಕೆ:2215-01-102-1-16-059 (ಗ್ರಾಮೀಣಾಭಿವೃದ್ಧಿ ಭವನ ಮತ್ತು ಇತರೆ ಕಟ್ಟಡಗಳ)ಯಡಿ ಇತರೆ ಖರ್ಚುಗಳಿಗಾಗಿ ರೂ.30.00ಕೋಟಿಗಳನ್ನು ಒದಗಿಸಲಾಗಿದೆ. ಈ ಅನುದಾನವನ್ನು ವಿನಿಯೋಗಿಸಿಕೊಳ್ಳುವ ಬಗ್ಗೆ ದಿನಾಂಕ:23-05-2017 ರಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್) ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ 2017–18ನೇ ಸಾಲಿನ ರಾಜ್ಯ ಆಯವ್ಯಯದಲ್ಲಿ ಒದಗಿಸಲಾಗಿರುವ ರೂ.30.00 ಕೋಟಿಗಳಲ್ಲಿ, ಹೊಸದಾಗಿ ರಚಿಸಲಾಗಿರುವ ಗ್ರಾಮ ಪಂಚಾಯತಿಗಳಿಗೆ ಕಟ್ಟಡ ನಿರ್ಮಾಣ ಮಾಡಲು ಹಾಗೂ ಇತರೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ರೂ.20.00 ಕೋಟಿಗಳನ್ನು, ತಾಲ್ಲೂಕು ಪಂಚಾಯತಿಗಳ ಕಟ್ಟಡ ನಿರ್ಮಾಣಕ್ಕಾಗಿ ರೂ.5.00 ಕೋಟಿಗಳನ್ನು ಹಾಗೂ ಪಂಚಾಯತ್ ಭವನ ಅಥವಾ ರಾಜ್ಯ ಪಂಚಾಯತ್ ಸಂಪನ್ಮೂಲ ಕೇಂದ್ರ ಕಟ್ಟಡ ನಿರ್ಮಾಣ ಮಾಡಲು ರೂ.5.00ಕೋಟಿಗಳನ್ನು ಹಂಚಿಕೆ ಮಾಡಲು ನಿರ್ಧರಿಸಿ ಮೇಲೆ ಓದಲಾದ (4) ರಲ್ಲಿ ಆದೇಶವನ್ನು ಹೊರಡಿಸಲಾಗಿದೆ.

ಪಂಚಾಯತಿ ರಾಜ್ ವ್ಯವಸ್ಥೆಯ ಸದೃಢ ಹಾಗೂ ಸಬಲೀಕರಣಕ್ಕಾಗಿ ಚುನಾಯಿತ ಪ್ರತಿನಿಧಿಗಳಿಗೆ ಸ್ಥಳೀಯ ಅವಶ್ಯಕತೆ, ಮೂಲಭೂತ ಸೌಲಭ್ಯ ಮತ್ತು ಅಭಿವೃದ್ಧಿ ವಿಷಯಗಳಿಗೆ ಸಂಬಂಧಿಸಿದಂತೆ ವಿಚಾರಧಾರೆಗಳನ್ನು ವೃದ್ಧಿಸುವುದು, ರಾಜ್ಯ ಮಟ್ಟದ ಸಂಪರ್ಕ ಸಭೆಗಳನ್ನು ನಡೆಸಲು ಹಾಗೂ ಸಾಂಸ್ಥಿಕವಾಗಿ ಆಡಳಿತದಲ್ಲಿ ಭಾಗವಹಿಸಲು ಸಾಮರ್ಥ್ಯಾಭಿವೃದ್ಧಿ ತರಬೇತಿಯನ್ನು ನೀಡುವುದು ಅತ್ಯವಶ್ಯಕವಾಗಿದೆ. ರಾಜ್ಯ ಮಟ್ಟದಲ್ಲಿ ತರಬೇತಿ ನೀಡುವ ಹಾಗೂ ಗ್ರಾಮೀಣಾಭಿವೃದ್ಧಿಗೆ ಪೂರಕವಾಗಿರುವ ಸಂಶೋಧನೆಗಳನ್ನು ನಡೆಸುವ ಉದ್ದೇಶದಿಂದ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಷಯಗಳಿಗೆ ಸಂಬಂಧಿಸಿದಂತೆ ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ರಾಜ್ಯ ಪಂಚಾಯತಿ ಸಂಪನ್ಮೂಲ ಕೇಂದ್ರ ಕಟ್ಟಡವನ್ನು ನಿರ್ಮಾಣ ಮಾಡಲು ಉದ್ದೇಶಿಸಲಾಗಿದೆ. ಮೇಲೆ ಓದಲಾದ (2)ರ ಪತ್ರದ ಮೂಲಕ ಈಗಾಗಲೇ ಮೇಲೆ ಓದಲಾದ (1)ರ ನಡವಳಿಗಳ ಪ್ರಕಾರ ರೂ.4.00ಕೋಟಿಗಳನ್ನು ಕರ್ನಾಟಕ ರೂರಲ್ ಇನ್‌ಫ್ರಾಸ್ಟ್ರಕ್ಚರ್ ಡೆವಲಪ್‌ಮೆಂಟ್ ಲಿಮಿಟೆಡ್, ಬೆಂಗಳೂರು ಇವರಿಗೆ ಬಿಡುಗಡೆಗೊಳಿಸಲಾಗಿರುತ್ತದೆ.

ಮೇಲೆ ಓದಲಾದ (4)ರ ಆದೇಶದನ್ವಯ 2017–18ನೇ ಸಾಲಿನ ಆಯವ್ಯಯದ ಲೆಕ್ಕ ಶೀರ್ಷಿಕೆ: 2215–01–102–1–16–059ರಡಿ ಗ್ರಾಮೀಣಾಭಿವೃದ್ಧಿ ಭವನ ಮತ್ತು ಇತರೆ ಕಟ್ಟಡಗಳಿಗಾಗಿ ರೂ.30.00ಕೋಟಿಗಳ ಅನುದಾನದಲ್ಲಿ ರೂ.5.00ಕೋಟಿಗಳನ್ನು ಬೆಂಗಳೂರಿನ ಜಕ್ಕೂರಿನಲ್ಲಿರುವ ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆಯ ಆವರಣದಲ್ಲಿ ರಾಜ್ಯ ಪಂಚಾಯತ್ ಸಂಪನ್ಮೂಲ ಕೇಂದ್ರ ಕಟ್ಟಡವನ್ನು ನಿರ್ಮಾಣ ಮಾಡಲು ಕರ್ನಾಟಕ ರೂರಲ್ ಇನ್‌ಫ್ರಾಸ್ಟ್ರಕ್ಚರ್ ಡೆವಲಪ್‌ಮೆಂಟ್ ಲಿಮಿಟೆಡ್, ಬೆಂಗಳೂರು ಇವರಿಗೆ ಬಿಡುಗಡೆಗೊಳಿಸಲು ನಿರ್ಧರಿಸಲಾಗಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 6 ತಾಪಸ 2011, ಬೆಂಗಳೂರು, ದಿನಾಂಕ:15–12–2017.**

ಮೇಲಿನ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದುಕೊಂಡು, ಪಂಚಾಯತಿ ರಾಜ್ ವ್ಯವಸ್ಥೆಯ ಸದೃಢ ಹಾಗೂ ಸಬಲೀಕರಣಕ್ಕಾಗಿ ಚುನಾಯಿತ ಪ್ರತಿನಿಧಿಗಳಿಗೆ ಸ್ಥಳೀಯ ಅವಶ್ಯಕತೆ, ಮೂಲಭೂತ ಸೌಲಭ್ಯ ಮತ್ತು ಅಭಿವೃದ್ಧಿ ವಿಷಯಗಳಿಗೆ ಸಂಬಂಧಿಸಿದಂತೆ ವಿಚಾರಧಾರೆಗಳನ್ನು ವೃದ್ಧಿಸುವುದು, ರಾಜ್ಯ ಮಟ್ಟದ ಸಂಪರ್ಕ ಸಭೆಗಳನ್ನು ನಡೆಸಲು ಹಾಗೂ ಸಾಂಸ್ಥಿಕವಾಗಿ ಆಡಳಿತದಲ್ಲಿ ಭಾಗವಹಿಸಲು ಸಾಮರ್ಥ್ಯಾಭಿವೃದ್ಧಿ ತರಬೇತಿಯನ್ನು ನೀಡುವುದು ಅತ್ಯವಶ್ಯಕವಾಗಿದೆ. ರಾಜ್ಯ ಮಟ್ಟದಲ್ಲಿ ತರಬೇತಿ ನೀಡುವ ಹಾಗೂ ಗ್ರಾಮೀಣಾಭಿವೃದ್ಧಿಗೆ ಪೂರಕವಾಗಿರುವ ಸಂಶೋಧನೆಗಳನ್ನು ನಡೆಸುವ ಉದ್ದೇಶದಿಂದ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಷಯಗಳಿಗೆ ಸಂಬಂಧಿಸಿದಂತೆ ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಬೆಂಗಳೂರಿನ ಜಕ್ಕೂರಿನಲ್ಲಿರುವ ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆಯ ಆವರಣದಲ್ಲಿ ರಾಜ್ಯ ಪಂಚಾಯತಿ ಸಂಪನ್ಮೂಲ ಕೇಂದ್ರ ಕಟ್ಟಡವನ್ನು ನಿರ್ಮಾಣ ಮಾಡಲು 2017–18ನೇ ಸಾಲಿನ ಆಯವ್ಯಯದ ಲೆಕ್ಕ ಶೀರ್ಷಿಕೆ:2215–01–102–1–16–059ರಡಿ ಗ್ರಾಮೀಣಾಭಿವೃದ್ಧಿ ಭವನ ಮತ್ತು ಇತರೆ ಕಟ್ಟಡಗಳಿಗಾಗಿ ರೂ.30.00ಕೋಟಿಗಳ ಅನುದಾನದಿಂದ ರೂ.5.00ಕೋಟಿ(ಐದು ಕೋಟಿ ರೂಪಾಯಿಗಳು ಮಾತ್ರ)ಗಳನ್ನು ಸರ್ಕಾರದ ಅಧೀನ ಕಾರ್ಯದರ್ಶಿ(ಜಿಲ್ಲಾ ಪಂಚಾಯತಿ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರು ರಾಜ್ಯ ಹುಜೂರು ಖಜಾನೆಯಿಂದ ಪೇಯೀಸ್ ರಸೀದಿಯ ಮೇಲೆ ಡ್ರಾ ಮಾಡಲು ಹಾಗೂ ಈ ಅನುದಾನವನ್ನು ಕರ್ನಾಟಕ ಸರ್ಕಾರ ಸ್ವಾಮ್ಯದ 'ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಗಮ'ದ ಬೆಂಗಳೂರು ನಗರದ ಎಸ್.ಸಿ ರಸ್ತೆ ಶಾಖೆಯ ಕಾರ್ಪೋರೇಷನ್ ಬ್ಯಾಂಕ್‌ನ ಉಳಿತಾಯ ಖಾತೆ ಸಂಖ್ಯೆ 014401601000499(IFSC Code CORP0000144) ಗೆ ಜಮೆ ಮಾಡಲು ಆದೇಶಿಸಿದೆ.

**ಅನುದಾನದ ವಿನಿಯೋಗ ಈ ಕೆಳಕಂಡ ನಿಬಂಧನೆಗಳಿಗೆ ಒಳಪಟ್ಟಿದೆ.**

1. ಅನುದಾನವನ್ನು ಯಾವ ಉದ್ದೇಶಗಳಿಗಾಗಿ ಬಿಡುಗಡೆಗೊಳಿಸಲಾಗಿದೆಯೋ, ಅದೇ ಉದ್ದೇಶಗಳಿಗೆ ಮಾತ್ರ ವಿನಿಯೋಗಿಸುವುದು.
2. ಕಟ್ಟಡದ ವಾಸ್ತು ವಿನ್ಯಾಸವು ನಿಯಮಾನುಸಾರ ವಾಸ್ತು ವಿನ್ಯಾಸಕಾರರು ಸಿದ್ಧಪಡಿಸಿರುವ ಮಾದರಿಯಲ್ಲಿರಬೇಕು.
3. ಕಾಲಮಿತಿಯಲ್ಲಿ ಕಟ್ಟಡವನ್ನು ನಿರ್ಮಿಸಬೇಕು.
4. ಈ ಆದೇಶದ ಮೂಲಕ ಬಿಡುಗಡೆಗೊಳಿಸಿದ ಅನುದಾನಕ್ಕೆ ಜಿ.ಎಫ್.ಆರ್ 19–ಎ ನಿಗದಿತ ನಮೂನೆಯಲ್ಲಿ ಹಣ ಬಳಕೆ ಪ್ರಮಾಣ ಪತ್ರವನ್ನು ನಿರ್ದೇಶಕರು(ಪಂ.ರಾಜ್–2), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರಿಗೆ ಸಲ್ಲಿಸುವುದು. Non-Duplication, Non-Division Non-Embezzlement ಪ್ರಮಾಣ ಪತ್ರಗಳನ್ನು ಸಲ್ಲಿಸುವುದು.
5. ಸರ್ಕಾರದಿಂದ ಅನುಮೋದಿತ ಗುಣಮಟ್ಟ ನಿಯಂತ್ರಣ ವಿಭಾಗದಿಂದ ಗುಣಮಟ್ಟ ಪರಿಶೀಲನೆಯನ್ನು ಮಾಡಿಸುವುದು.

6. ರಾಜ್ಯ ಪಂಚಾಯತಿ ಸಂಪನ್ಮೂಲ ಕೇಂದ್ರ ಕಟ್ಟಡದ ಕಾಮಗಾರಿಯನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಅಳವಡಿಸುವುದು.

7. ರಾಜೀವ್ ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ (ಆರ್.ಜಿ.ಪಿ.ಎಸ್.ಎ) ಯೋಜನೆಯ ಕೇಂದ್ರ ಸರ್ಕಾರದ ಪ್ರಾಯೋಜಿತ ತೃತೀಯ ಮಧ್ಯವರ್ತಿ (Third Party Evaluation) ಗಳಿಂದ ಎಲ್ಲಾ ತರಬೇತಿ ಕಾರ್ಯಕ್ರಮಗಳನ್ನು ಪರಿವೀಕ್ಷಿಸಲು ಹಾಗೂ ಮೌಲ್ಯಮಾಪನ ಮಾಡಲು ಆಗಮಿಸುವರು.

8. ರಾಜ್ಯ ಪಂಚಾಯತಿ ಸಂಪನ್ಮೂಲ ಕೇಂದ್ರ ಕಟ್ಟಡವು ಸಂಪೂರ್ಣವಾಗಿ ನಿರ್ಮಾಣಗೊಂಡ ನಂತರ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಹಸ್ತಾಂತರಿಸಲು ಕೂಡಲೇ ಕ್ರಮವಹಿಸುವುದು.

ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ:ಎಫ್‌ಡಿ 1 ಟಿಎಫ್‌ಪಿ 2017, ದಿನಾಂಕ:05-04-2017 ರನ್ವಯ ಆಯಾ ಇಲಾಖೆಗಳ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಈ ಆದೇಶವನ್ನು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

15/12/2017
(ಪಿ.ದೇವಸಹಾಯಂ)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

15.12.17

ಗೆ,

1. ಮಹಾಲೇಖಪಾಲರು (ಎ ಅಂಡ್ ಇ), ಕರ್ನಾಟಕ, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಜಿ ಅಂಡ್ ಎಸ್ ಎಸ್ ಎ), ಕರ್ನಾಟಕ, ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (ಇ ಅಂಡ್ ಆರ್ ಎಸ್ ಎ), ಕರ್ನಾಟಕ, ಬೆಂಗಳೂರು.
5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಹಾಗೂ ಅಭಿವೃದ್ಧಿ ನಿಗಮ, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ಸರ್ಕಲ್, ಬೆಂಗಳೂರು.
6. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಮೈಸೂರು
6. ಇಲಾಖಾ ವೆಬ್‌ಸೈಟ್/ಕರ್ನಾಟಕ ವಿಕಾಸ ಮಾಸ ಪತ್ರಿಕೆ.
7. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

**ಪ್ರತಿಯನ್ನು ಮಾಹಿತಿಗಾಗಿ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತಿ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ಗ್ರಾ.ಅ.ಪಂ.ರಾಜ್ ಇಲಾಖೆ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್), ಗ್ರಾ.ಅ.ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
4. ನಿರ್ದೇಶಕರು (ಪಂ.ರಾಜ್-2), ಗ್ರಾ.ಅ.ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕ, ಬಹುಮಹಡಿಗಳ ಕಟ್ಟಡ, ಬೆಂಗಳೂರು.